**ಕರ್ನಾಟಕ ಸರ್ಕಾರ**

ಸಂಖ್ಯೆ: ಆಕುಕ 224 ಪಿಟಿಡಿ 2024

ಕರ್ನಾಟಕ ಸರ್ಕಾರ ಸಚಿವಾಲಯ,
ವಿಕಾಸಸೌಧ,
ಬೆಂಗಳೂರು, ದಿನಾಂಕ:10-09-2024.

**ಅಧಿಸೂಚನೆ**

ವಿಷಯ 2024-25ನೇ ಶೈಕ್ಷಣಿಕ ಸಾಲಿಗೆ ರಾಜ್ಯದ ಸರ್ಕಾರಿ ಮತ್ತು ಖಾಸಗಿ ಫಾರ್ಮಸಿ ಶಿಕ್ಷಣ ಸಂಸ್ಥೆಗಳಲ್ಲಿರುವ ಡಿ ಫಾರ್ಮ ಕೋರ್ಸಿಗೆ ಸರ್ಕಾರಿ ಕೋಟಾ ಸೀಟುಗಳಿಗೆ ಸೀಟ್ ಮ್ಯಾಟ್ರಿಕ್ಸ್ ನಿಗದಿಪಡಿಸುವ ಕುರಿತು.

*-*-*-*-*

ಸರ್ಕಾರದ ಆದೇಶ ಸಂಖ್ಯೆ: ಆಕುಕ 44 ಎಂಪಿಎಸ್ 2003 (2), ದಿನಾಂಕ: 03-07-2023 ರನ್ವಯ ಕರ್ನಾಟಕ ನರ್ಸಿಂಗ್, ಫಾರ್ಮಸಿ ಮತ್ತು ಫಿಜಿಯೋಥೆರಪಿ ಕೋರ್ಸ್‌ಗಳ ಪ್ರವೇಶಕ್ಕೆ ವಿದ್ಯಾರ್ಥಿಗಳ ಆಯ್ಕೆಗೆ ನಿಯಮಾವಳಿಗಳನ್ನು ರಚಿಸಲಾಗಿದೆ.

ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಕಾಯಿದೆ 1994ರ ಸೆಕ್ಷನ್ 45(10)(ಬಿ) ರಲ್ಲಿ ಸರ್ಕಾರಿ ಮತ್ತು ಖಾಸಗಿ ಕಾಲೇಜುಗಳಲ್ಲಿ ಆಯಾ ಕೋರ್ಸ್‌ಗಳಿಗೆ ಸಂಬಂಧಪಟ್ಟಂತೆ. ಮಂಜೂರು ಮಾಡಿರುವ ಸೀಟುಗಳಲ್ಲಿ ಲಭ್ಯವಾಗುವ ಸರ್ಕಾರಿ ಕೋಟಾ ಸೀಟುಗಳಿಗೆ ಸಂಬಂಧಪಟ್ಟಂತೆ ಸರ್ಕಾರವು ಕಾಲಕಾಲಕ್ಕೆ ಹೊರಡಿಸಿರುವ ಮೀಸಲಾತಿ ನಿಯಮಗಳಿಗೆ ಸಂಬಂಧಪಟ್ಟಂತೆ ಸೇವಾನಿರತ ಅಭ್ಯರ್ಥಿಗಳನ್ನು ಹಾಗೂ ವಿದ್ಯಾರ್ಥಿಗಳನ್ನು ಕೌನ್ಸಿಲಿಂಗ್ ಮೂಲಕ ಆಯ್ಕೆ ಮಾಡಿ ಪಟ್ಟಿಯನ್ನು ಪ್ರಕಟಿಸಲಾಗುತ್ತದೆ.

ಸರ್ಕಾರಿ ಮತ್ತು ಖಾಸಗಿ ಫಾರ್ಮಸಿ ಕಾಲೇಜುಗಳಲ್ಲಿ ಆಯಾ ಕೋರ್ಸ್‌ಗಳಿಗೆ ಸಂಬಂಧಪಟ್ಟಂತೆ ಮಂಜೂರು ಮಾಡಿರುವ ಸೀಟುಗಳಲ್ಲಿ ಲಭ್ಯವಾಗುವ ಸರ್ಕಾರಿ ಕೋಟಾ ಸೀಟುಗಳಿಗೆ ಸರ್ಕಾರವು ಕಾಲಕಾಲಕ್ಕೆ ಹೊರಡಿಸಿರುವ ಮೀಸಲಾತಿ ನಿಯಮಗಳಿಗೆ ಅನುಗುಣವಾಗಿ 2024-25ನೇ ಶೈಕ್ಷಣಿಕ ಸಾಲಿಗೆ ಸರ್ಕಾರಿ ಮತ್ತು ಖಾಸಗಿ ಫಾರ್ಮಸಿ ಶಿಕ್ಷಣ ಸಂಸ್ಥೆಗಳಲ್ಲಿರುವ ಡಿ.ಫಾರ್ಮ ಕೋರ್ಸ್‌ಗೆ ಸರ್ಕಾರಿ ಕೋಟಾ ಸೀಟುಗಳ

19/9/24 ADM 19/9/24 19/9/2024
GOVERNMENT COLLEGE OF PHARMACY BANGALORE-27. No. 4319 Date: 20/9/24

ಸೀಟ್ ಮ್ಯಾಟ್ರಿಕ್ಸ್ ಅನ್ನು ಈ ಅಧಿಸೂಚನೆಯೊಂದಿಗೆ ಲಗತ್ತಿಸಿರುವ ಈ ಕೆಳಕಂಡ ಅನುಬಂಧಗಳಂತೆ ನಿಗಧಿಪಡಿಸಿ ಹೊರಡಿಸಲಾಗಿದೆ.

| | |
|---|---|
| ಡಿ-ಫಾರ್ಮಾ | ಅನುಬಂಧ – I<br>ಅನುಬಂಧ – II<br>ಅನುಬಂಧ - III |

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

**(ಶ್ರೀಪತಿ ಪಿ.ಕೆ)**
ಸರ್ಕಾರದ ಅಧೀನ ಕಾರ್ಯದರ್ಶಿ
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
(ಭಾವೈಪ ಮತ್ತು ಸಮನ್ವಯ)

**ಇವರಿಗೆ:**

1. ಔಷಧ ನಿಯಂತ್ರಕರು, ಔಷಧ ನಿಯಂತ್ರಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.
2. ಪ್ರಾಂಶುಪಾಲರು, ಸರ್ಕಾರಿ ಔಷಧ ವಿಜ್ಞಾನ ಮಹಾವಿದ್ಯಾಲಯ, ಕಾಳಿಂಗರಾವ್‌ರಸ್ತೆ, ಸುಬ್ಬಯ್ಯ ವೃತ್ತ, ಬೆಂಗಳೂರು-27.
3. ಸದಸ್ಯ ಕಾರ್ಯದರ್ಶಿ, ಪರೀಕ್ಷಾ ಪ್ರಾಧಿಕಾರ ಮಂಡಳಿ , ಕಾಳಿಂಗರಾವ್‌ರಸ್ತೆ, ಸುಬ್ಬಯ್ಯ ವೃತ್ತ, ಬೆಂಗಳೂರು.
4. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

**ಪ್ರತಿಗಳು:**

1. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
2. ಸರ್ಕಾರದ ಜಂಟಿ ಕಾರ್ಯದರ್ಶಿ-3, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಆಪ್ತ ಸಹಾಯಕ.